# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 342 |
| ಉತ್ತರಿಸಬೇಕಾದ ದಿನಾಂಕ | : 17.07.2019 |
| ಸದಸ್ಯರ ಹೆಸರು | : ಶ್ರೀ ಹೆಚ್ ಎಂ. ರಮೇಶ್ ಗೌಡ, (ವಿಧಾನ ಸಭೆಯಿಂದ ಚುನಾಯಿತರಾದವರು |
| ಉತ್ತರಿಸುವ ಸಚಿವರು | : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು. |

| ಕ್ರಸ | ಪ್ರಶ್ನೆ | ಮಾಹಿತಿ |
|---|---|---|
| ಅ | ರಾಜ್ಯದ ಎಲ್ಲಾ ಕೇಂದ್ರಗಳಲ್ಲಿ ಒಲಿಂಪಿಕ್ಸ್ ಅಸೋಸಿಯೇಷನ್, ಅಥ್ಲೆಟಿಕ್ ಫೆಡರೇಷನ್‌ನಂತಹ ಸಮರ್ಪಕ ಕ್ರೀಡಾ ಉತ್ತೇಜನ ಸಂಸ್ಥೆಗಳನ್ನು ಸ್ಥಾಪಿಸುವ ಕುರಿತು ಸರ್ಕಾರ ಚಿಂತೆ ನಡೆಸಿದೆಯೇ; | ರಾಜ್ಯ ಮಟ್ಟದಲ್ಲಿ ಆಯಾ ಕ್ರೀಡೆಗಳ ರಾಜ್ಯ ಕ್ರೀಡಾ ಸಂಸ್ಥೆಗಳಿಗೆ ನಿಯಮಾನುಸಾರ ಮಾನ್ಯತೆ ನೀಡಲಾಗುತ್ತಿದ್ದು, ಅನುದಾನ ಸಂಹಿತೆ ನಿಯಮಾನುಸಾರ ಕ್ರೀಡಾ ಚಟುವಟಿಕೆಗಳಿಗಾಗಿ ಅನುದಾನ ಒದಗಿಸಲಾಗುತ್ತಿದೆ. ಕರ್ನಾಟಕ ಒಲಿಂಪಿಕ್ ಸಂಸ್ಥೆ, ಕರ್ನಾಟಕ ಅಥ್ಲೆಟಿಕ್ ಸಂಸ್ಥೆ ಮತ್ತಿತರ ರಾಜ್ಯ ಕ್ರೀಡಾ ಸಂಸ್ಥೆಗಳು ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಸಂಸ್ಥೆಗಳನ್ನು ಹೊಂದಿದ್ದು, ನಿಯಮಾನುಸಾರ ಸದರಿ ಸಂಸ್ಥೆಗಳಿಗೆ ಉತ್ತೇಜನ ನೀಡಲಾಗುತ್ತಿದೆ. |
| ಆ | ಉದಯೋನ್ಮುಖ ಕ್ರೀಡಾಪಟುಗಳನ್ನು ಗುರುತಿಸಿ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ವಾರ್ಷಿಕ ಪ್ರೋತ್ಸಾಹ ಧನ, ಸಹಾಯ ಧನ ನೀಡುವ ಬಗ್ಗೆ ಸರ್ಕಾರದ ನಿಲುವೇನು; ಯಾವ ಹೊಸ ಯೋಜನೆಗಳನ್ನು ಸರ್ಕಾರ ಹಮ್ಮಿಕೊಂಡಿದೆ; | ರಾಜ್ಯ ಕ್ರೀಡಾ ಇಲಾಖೆ ವತಿಯಿಂದ ಒಲಿಂಪಿಕ್ ಗೇಮ್ಸ್, ವರ್ಲ್ಡ್ ಕಪ್/ಚಾಂಪಿಯನ್‌ಷಿಪ್‌ಗಳ ಪದಕ ವಿಜೇತರು ಹಾಗೂ ರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ (ಒಲಿಂಪಿಕ್ ಕ್ರೀಡೆಗಳು) ಭಾಗವಹಿಸಿ ಪದಕ ಪಡೆದ ರಾಜ್ಯದ ಕ್ರೀಡಾಪಟುಗಳಿಗೆ ನಗದು ಪುರಸ್ಕಾರ ನೀಡಲಾಗುತ್ತಿದೆ. ಅಲ್ಲದೇ, ಸಾಧಕ ಕ್ರೀಡಾಪಟುಗಳಿಗೆ ನಗದು ಪುರಸ್ಕಾರ ಒಳಗೊಂಡ ಏಕಲವ್ಯ ಪ್ರಶಸ್ತಿ, ಜೀವಮಾನ ಸಾಧನೆ ಪ್ರಶಸ್ತಿ ಹಾಗೂ ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಗಳನ್ನು ನೀಡಲಾಗುತ್ತಿದೆ.<br><br>ಪ್ರತಿಭಾವಂತ ಕ್ರೀಡಾಪಟುಗಳಿಗೆ ಶೈಕ್ಷಣಿಕ ಶುಲ್ಕ ಮರುಪಾವತಿ ಮಾಡುವ ಹಾಗೂ ಕರ್ನಾಟಕ ಸ್ಪೋರ್ಟ್ಸ್ ಅಕಾಡೆಮಿ ಫಾರ್ ಎಕ್ಸಲೆನ್ಸಿ ಯೋಜನೆಯಡಿ ಅತ್ಯಂತ ಪ್ರತಿಭಾನ್ವಿತ ಯುವ ಕ್ರೀಡಾಪಟುಗಳಿಗೆ ಕ್ರೀಡಾ ಸಾಧನೆಗಾಗಿ ತರಬೇತಿ, ಪ್ರಯಾಣ, ಪೌಷ್ಟಿಕ ಆಹಾರ, ಕ್ರೀಡಾ ಕಿಟ್ ಮತ್ತಿತರ ವೆಚ್ಚಗಳಿಗಾಗಿ ಸಹಾಯ ಧನ ನೀಡುವ ಹೊಸ ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗಿದೆ. |
| ಇ | ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳ ಕ್ರೀಡಾಂಗಣ ನಿರ್ವಹಣೆಯ ಸದ್ಯದ ಸ್ಥಿತಿಗತಿಗಳೇನು; ಈವರೆಗೆ ಇದರ ನಿರ್ವಹಣೆಗೆ ವ್ಯಯವಾದ ಒಟ್ಟು ಹಣವೆಷ್ಟು; (ವಿವರ ನೀಡುವುದು) | ಜಿಲ್ಲಾ ಕ್ರೀಡಾಂಗಣಗಳ ನಿರ್ವಹಣೆಗೆ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಕ್ರೀಡಾಂಗಣ ಸಮಿತಿ ಹಾಗೂ ತಾಲ್ಲೂಕು ಕ್ರೀಡಾಂಗಣಗಳ ನಿರ್ವಹಣೆಗೆ ಸಂಬಂಧಿತ ಶಾಸಕರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಕ್ರೀಡಾಂಗಣಗಳ ಸಮಿತಿಗಳನ್ನು ರಚಿಸಲಾಗಿದೆ. ಜಿಲ್ಲಾ ಪಂಚಾಯತ್ ವಲಯದಲ್ಲಿ ಕ್ರೀಡಾಂಗಣಗಳ ನಿರ್ವಹಣೆಗೆ ಅನುದಾನ ಹಂಚಿಕೆ ಮಾಡಲಾಗುತ್ತಿದ್ದು, 2018-19ನೇ ಸಾಲಿನಲ್ಲಿ ಹಂಚಿಕೆ ಮಾಡಲಾದ ರೂ 1690.81 ಗಳಲ್ಲಿ ರೂ 1539.96 ವೆಚ್ಚ ಭರಿಸಲಾಗಿದೆ. |

| | | |
|---|---|---|
| ಈ | ರಾಜ್ಯದ ಬೇರೆ ಬೇರೆ ಭಾಗಗಳಲ್ಲಿ ಅಥ್ಲೆಟಿಕ್ ತರಬೇತುದಾರರ ಕೊರತೆ ಕಂಡುಬಂದಿದೆಯೇ;<br><br>ಕೊರತೆಯಿದ್ದಲ್ಲಿ ಮರು ನೇಮಕಾತಿಗೆ ಕ್ರಮ ಕೈಗೊಳ್ಳಲಾಗಿದೆಯೇ; (ವಿವರ ನೀಡುವುದು) | ಹೌದು.<br><br>ಸರ್ಕಾರಿ ಆದೇಶ ಸಂಖ್ಯೆ ಯುಸೇಇ 24 ಯುಇಸೇ 2019, ದಿನಾಂಕ 17-06-2019 ರಲ್ಲಿ 80 ತರಬೇತುದಾರರು ಮತ್ತು 20 ತಾಂತ್ರಿಕ ಸಿಬ್ಬಂದಿಗಳನ್ನು (ಒಟ್ಟು 100 ಹುದ್ದೆಗಳು) ಒಂದು ವರ್ಷದ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಂದಿನವರೆಗೆ ಮಾತ್ರ ಸಂಚಿತ ವೇತನದ ಆಧಾರದ ಮೇಲೆ ಆಯ್ಕೆ ಮೂಲಕ ನೇಮಕಾತಿ ಮಾಡಿಕೊಳ್ಳಲು ಸರ್ಕಾರ ಅನುಮೋದನೆ ನೀಡಿದೆ. ಅದರಂತೆ ಈಗಾಗಲೇ ವಿವಿಧ ಕ್ರೀಡೆಗಳಲ್ಲಿ ಅಗತ್ಯವಿರುವ ತರಬೇತುದಾರರನ್ನು ನೇಮಕ ಮಾಡಿಕೊಳ್ಳಲು ಕ್ರಮವಹಿಸಲಾಗಿದೆ. |
| ಉ | ರಾಷ್ಟ್ರದಲ್ಲೇ ಪ್ರಸಿದ್ಧಿ ಪಡೆಯುತ್ತಿರುವ ಗ್ರಾಮೀಣ ಕ್ರೀಡೆ ಕಬಡ್ಡಿ ಅಭಿವೃದ್ಧಿಗೆ ಪ್ರತ್ಯೇಕ ಕ್ರೀಡಾ ಕೇಂದ್ರ ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ? (ಮಾಹಿತಿ ನೀಡುವುದು) | ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ಆಧುನಿಕ ಕಬಡ್ಡಿ ಮ್ಯಾಟ್‌ಗಳನ್ನು ಒದಗಿಸಲಾಗಿದ್ದು, ಕಬಡ್ಡಿ ತರಬೇತಿಗೆ ಉತ್ತೇಜನ ನೀಡಲಾಗುತ್ತಿದೆ. ಪ್ರತ್ಯೇಕ ಕಬಡ್ಡಿ ಕೇಂದ್ರಗಳನ್ನು ನಿರ್ಮಿಸುವ ಪ್ರಸ್ತಾವನೆ ಪ್ರಸ್ತುತ ಇರುವುದಿಲ್ಲ. |

ವೈಎಸ್ ಡಿ-/18/2019

**(ಕೆ. ಎಸ್. ಈಶ್ವರಪ್ಪ)**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಹಾಗೂ ಯುವ ಸಬಲೀಕರಣ ಮತ್ತು
ಕ್ರೀಡಾ ಸಚಿವರು.